ಶ್ರೀ ಪಾಟೀಲ್ ಶಿವಾನಂದ ಸಿದ್ರಾಮಪ್ಪ (ತಿಕೋಟ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲಾ ಆಸ್ಪತ್ರೆಯನ್ನು ಅಭಿವೃದ್ಧಿ ಸಲುವಾಗಿ ಕೆಹೆಚ್‌ಎಸ್‌ಡಿಪಿಯವರಿಗೆ ವಹಿಸಿ ಕೊಟ್ಟಿರುವ ದಿನಾಂಕ ಯಾವುದು?

ಆ) ಅದನ್ನು ನಿರ್ವಹಿಸಿಕೊಂಡ ಮೇಲೆ ಇಲ್ಲಿಯವರೆವಿಗೂ ಅವರು ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಯಾವುವು? (ಮಾಹಿತಿ ಒದಗಿಸುವುದು)

ಇ) ಸದರಿ ಯೋಜನೆ ಅಡಿಯಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಗಳ ಮೊತ್ತ ಎಷ್ಟು ಮತ್ತು ಯಾವ ಯಾವ ಕಾಮಗಾರಿಗಳು ಯಾವಾಗ ಸಂಪೂರ್ಣಗೊಳ್ಳುತ್ತವೆ.

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬಿಜಾಪುರ ಜಿಲ್ಲಾ ಆಸ್ಪತ್ರೆಯ ಅಭಿವೃದ್ಧಿ ಕಾರ್ಯವು ಯೋಜನೆಯ 3ನೇ ಹಂತದಲ್ಲಿ ಸೇರಿದ್ದು ದಿನಾಂಕ 1-4-1999ರಂದು ಈ ಆಸ್ಪತ್ರೆಯನ್ನು ಲೋಕೋಪಯೋಗಿ ಇಲಾಖೆಯಿಂದ ಕೆಹೆಚ್‌ಎಸ್‌ಡಿಪಿ ವಹಿಸಿಕೊಂಡಿದೆ.

ಆ) ಈ ಆಸ್ಪತ್ರೆಯ ಕಾಮಗಾರಿಗೆ ರೂ.295 ಲಕ್ಷಗಳ ಅಂದಾಜು ಮಂಜೂರಾಗಿದೆ. ಟೆಂಡರ್‌ಗಳು ಸ್ವೀಕೃತವಾಗಿದ್ದು ಅವುಗಳ ಮೌಲ್ಯಮಾಪನ ಪ್ರಗತಿಯಲ್ಲಿದೆ. ಆಸ್ಪತ್ರೆ ನವೀಕರಣ ಮತ್ತು ವಿಸ್ತರಣೆ, 5 ವೈದ್ಯರು, 10 ಶುಶ್ರೂಷಕರು ಮತ್ತು 12 ಗ್ರೂಪ್ 'ಡಿ' ನೌಕರರ ವಸತಿ ಗೃಹಗಳನ್ನು ನಿರ್ಮಿಸಬೇಕಾಗಿರುತ್ತದೆ.

ಇ) ಟೆಂಡರ್ ಮೌಲ್ಯಮಾಪನ ಮುಗಿದ ಕೂಡಲೇ ವಿಶ್ವಬ್ಯಾಂಕಿನ ಅನುಮೋದನೆ ಪಡೆದು ಕಾಮಗಾರಿಯನ್ನು ಗುತ್ತಿಗೆದಾರರಿಗೆ ವಹಿಸಲಾಗುವುದು. ಕಾಮಗಾರಿ ಪ್ರಾರಂಭಗೊಂಡ ದಿನಾಂಕದಿಂದ 18 ತಿಂಗಳೊಳಗಾಗಿ ಪೂರ್ಣಗೊಳ್ಳುವುದು.

ಪ್ರಾಥಮಿಕ ಶಾಲಾ ಶಿಕ್ಷಕರ ಬೇಡಿಕೆಗಳು

1446 (2002)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಥಮಿಕ ಶಾಲೆಗಳ ಮುಖ್ಯೋಪಾಧ್ಯಾಯರ ಹುದ್ದೆಗೆ ವೇತನ ಶ್ರೇಣಿ ನೀಡುವುದು ಹಾಗೂ 20 ವರ್ಷಗಳ ಕಾಲ ಸೇವೆ ಸಲ್ಲಿಸಿದ ಪ್ರಾಥಮಿಕ ಶಾಲಾ ಶಿಕ್ಷಕರಿಗೆ

ಬಡ್ತಿ ಅವಕಾಶ ಕಲ್ಪಿಸಿಕೊಡುವ ಬಗ್ಗೆ ಸರ್ಕಾರ ಒಪ್ಪಿಕೊಂಡಿರುವುದು ನಿಜವೇ?

ಆ) ಹಾಗಿದ್ದಲ್ಲಿ ಈ ಬೇಡಿಕೆಗಳನ್ನು ಈಡೇರಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಜಿ.ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ದ.ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಗುತ್ತಿಗೆ ಆಧಾರಿತ ವೈದ್ಯರ ಖಾಯಂ ಮಾಡುವ ಬಗ್ಗೆ.

1447 (2003)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಯಾವ ಯಾವ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು?

ಆ) ಗ್ರಾಮಾಂತರ ಪ್ರದೇಶದಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಸದರಿ ವೈದ್ಯರನ್ನು ಖಾಯಂ ನೆಲೆಯಲ್ಲಿ ನಿಯುಕ್ತಿಗೊಳಿಸಲಾಗುವುದೇ? ಹಾಗಿದ್ದಲ್ಲಿ ಯಾವಾಗ?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಸಚಿವರು):

ಅ) ಒಟ್ಟು 87 ವೈದ್ಯರು. ಗುತ್ತಿಗೆ ಆಧಾರದ ಮೇಲೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ (ಪಟ್ಟಿ ಲಗತ್ತಿಸಿದೆ).

ಆ) ಈಗಾಗಲೇ 180 ಮಂದಿ ಗುತ್ತಿಗೆ ವೈದ್ಯರುಗಳ ಸೇವೆಯನ್ನು ಸಕ್ರಮಗೊಳಿಸಲಾಗಿದೆ. ಬೇರೆ 138 ಗುತ್ತಿಗೆ ವೈದ್ಯಾಧಿಕಾರಿಗಳ ಸೇವೆಯನ್ನು ಸಕ್ರಮಗೊಳಿಸುವ ಪ್ರಕ್ರಿಯೆ ಪರಿಶೀಲನೆಯಲ್ಲಿದೆ.